# ಸ್ವಚ್ಛ ಭಾರತ ಅಭಿಯಾನ

## ಪೀಠಿಕೆ

ಸ್ವಚ್ಛ ಎಂದರೆ ನಿರ್ಮಲವಾದದ್ದು, ಪರಿಶುದ್ಧವಾದದ್ದು ಎಂದರ್ಥ. ಸ್ವಚ್ಛ ಭಾರತ ಎಂದರೆ ಭಾರತ ದೇಶದ ಕಲುಷಿತ ಸ್ಥಳಗಳನ್ನು ನಿರ್ಮಲಗೊಳಿಸುವದು. ಸ್ವಚ್ಛ ಭಾರತ ಅಭಿಯಾನವು ಭಾರತ ದೇಶದ ಒಂದು ಅತ್ಯುತ್ತಮ ನೈರ್ಮಲ್ಯ ಯೋಜನೆಯಾಗಿದೆ. ಪ್ರಸ್ತುತ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯಾಗಿದ್ದು ಭಾರತ ದೇಶವನ್ನು ಸ್ವಚ್ಛಗೊಳಿಸುವ ನಿಟ್ಟಿನಲ್ಲಿ ಅತ್ಯಂತ ಮಹತ್ವಪೂರ್ಣ ಅಭಿಯಾನವಾಗಿದೆ.

## ವಿಷಯ ನಿರೂಪಣೆ

"ಆರೋಗ್ಯವೇ ಮಹಾಭಾಗ್ಯ" ಎಲ್ಲಿದಿಯೋ ಸ್ವಚ್ಛತೆ ಅಲ್ಲಿದೆ ಆರೋಗ್ಯ ಎಂಬ ಹಿತನುಡಿಗಳಂತೆ ನಮ್ಮ ಸುತ್ತಮುತ್ತಲಿನ ಪ್ರದೇಶಗಳು ಸ್ವಚ್ಛವಾಗಿದ್ದರೆ ಅದು ನಮಗೆ ಆರೋಗ್ಯಭಾಗ್ಯವನ್ನು ತಂದುಕೊಡುತ್ತದೆ. ಇಲ್ಲವಾದರೆ ಅನಾರೋಗ್ಯ ಉಂಟಾಗಿ ಕಾಯಿಲೆಗಳು ಉಲ್ಬಣಿಸಬಹುದು. ಆದ್ದರಿಂದ ನಾವು ನಮ್ಮ ಸುತ್ತಮುತ್ತಲಿನ ಪ್ರದೇಶಗಳನ್ನು ನೈರ್ಮಲ್ಯದಿಂದ ಇರುವಂತೆ ನೋಡಿಕೊಳ್ಳಬೇಕು. ಭಾರತ ದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಉದ್ದೇಶದಿಂದ ದಿನಾಂಕ ೦೨/೧೦/೨೦೧೪ ರಂದು ನಮ್ಮ ದೇಶದ ಪ್ರಧಾನ ಮಂತ್ರಿಯಾದ ಶ್ರೀ ನರೇಂದ್ರ ಮೋದಿಯವರು ಸ್ವತ: ತಾವೇ ಭಾಗವಹಿಸುವದರ ಮೂಲಕ ಸ್ವಚ್ಛ ಭಾರತ ಅಭಿಯಾನಕ್ಕೆ ಚಾಲನೆ ನೀಡಿದರು.

FOR KANNADA

ಮಹಾತ್ಮ ಗಾಂಧೀಜಿಯವರ ಹುಟ್ಟಿದ ದಿನದಂದು ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು ಗಾಂಧೀಜಿಯವರ ನಿರ್ಮಲ ಭಾರತ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಅತ್ಯುತ್ತಮ ಅಭಿಯಾನವಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ನೌಕರರು, ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳು, ರಾಜಕೀಯ ಮುಖಂಡರುಗಳು, ದೇಶದ ಜನತೆಯು ಪ್ರತಿಜ್ಞೆಯ ಮೂಲಕ ಈ ಅಭಿಯಾನಕ್ಕೆ ಕೈಜೋಡಿಸಿದ್ದಾರೆ.

"ಸ್ವಚ್ಛತೆ ಉತ್ತಮ ಆರೋಗ್ಯದ ತಳಹದಿ" ಆದ್ದರಿಂದ ಸ್ವಚ್ಛತೆಯಿಂದ ಕೂಡಿದ ಸ್ಥಳ ನೋಡಲು ಸುಂದರವಾಗಿರುವಂತೆ ರೋಗಮುಕ್ತವು ಆಗಿರುತ್ತದೆ. ಆದ್ದರಿಂದ ನಾವು ಮೊದಲು ನಮ್ಮ ಮನೆ, ಬೀದಿ, ಗ್ರಾಮ, ಶಾಲಾ-ಕಾಲೇಜುಗಳನ್ನು ಸ್ವಚ್ಛವಾಗಿಟ್ಟುಕೊಂಡರೆ ಈ ಅಭಿಯಾನಕ್ಕೆ ಪ್ರೋತ್ಸಾಹ ನೀಡಿದಂತೆ ಆಗುತ್ತದೆ. ನಾವುಗಳು ಪ್ರತಿನಿತ್ಯ ಸ್ವಲ್ಪ ಸಮಯವಾದರೂ ಸ್ವಚ್ಛತೆಗೆ ಮೀಸಲಿಟ್ಟು , ಸ್ವಚ್ಛತಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಆರೋಗ್ಯದಿಂದ ಇರೋಣ.

**ಉಪಸಂಹಾರ -** " ಏಕ್ ಕದಂ ಸ್ವಚ್ಛತಾ ಕೆ ಓರ್" ಎಂಬ ಧ್ಯೇಯ ವಾಕ್ಯವನಿಟ್ಟುಕೊಂಡು ನಾವೆಲ್ಲರೂ ನಿರ್ಮಲ ಮನಸ್ಸಿನಿಂದ ನಮ್ಮ ದೇಶವನ್ನು ನೈರ್ಮಲ್ಯಗೊಳಿಸಿಕೊಳ್ಳಬೇಕು. ಈ ಅಭಿಯಾನದಲ್ಲಿ ಭಾಗವಹಿಸಿ , ಪ್ರೋತ್ಸಾಹಿಸಿ ಸ್ವಚ್ಛ ಸುಂದರ ಪರಿಸರದಿಂದ ಕೂಡಿದ ಭಾರತವನ್ನು ನಿರ್ಮಿಸಿ , ಗಾಂಧೀಜಿಯವರ ಕನಸನ್ನು ನನಸು ಮಾಡೋಣ ಎಂಬ ಆಶಯ ನಮ್ಮೆಲ್ಲದಾಗಿರಲಿ.

ಸುಮನಾ ಶ್ರೀರಾಮ್